CN = 2274

373
6/1/2017

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪಿ ಎ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಗೆ 2016-17ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸುವ ಬಗ್ಗೆ-

-----

**ಓದಲಾಗಿದೆ:-**

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 131 ಟಿಪಿಇ 2014, ದಿನಾಂಕ:20-08-2014.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 062 ಟಿಪಿಇ 2015, ದಿನಾಂಕ:08-06-2015.
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 16 ಡಿವಿಪಿ (2) 2015, ದಿನಾಂಕ:05/04/2016 ಮತ್ತು 24/10/2016

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಅಧಿಸೂಚನೆಯಲ್ಲಿ ರಾಜ್ಯ ಸರ್ಕಾರವು, ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಲು / ನವೀಕರಿಸಲು ನಿಯಮಗಳನ್ನು / ಮಾರ್ಗಸೂಚಿಯನ್ನು ರಚಿಸಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಪಿ ಎ ಪಾಲಿಟೆಕ್ನಿಕ್, ಮಂಗಳೂರು ಸಂಸ್ಥೆಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ 2015-16ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರು ಪಿ ಎ ಪಾಲಿಟೆಕ್ನಿಕ್, ಮಂಗಳೂರು ಈ ಸಂಸ್ಥೆಯು, ರಾಜ್ಯ ಸರ್ಕಾರವು ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಲು / ನವೀಕರಿಸಲು ಮೇಲಿನ ಕ್ರಮ ಸಂಖ್ಯೆ (1) ರಂತೆ ರೂಪಿಸಿರುವ ನಿಯಮಗಳ / ಮಾರ್ಗಸೂಚಿಗಳ ಪ್ರಕಾರ ಈಗಾಗಲೇ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಹೊಂದಿರುವ ಪಿ ಎ ಪಾಲಿಟೆಕ್ನಿಕ್, ಮಂಗಳೂರು ಖಾಸಗಿ ಶಿಕ್ಷಣ ಸಂಸ್ಥೆಯು ಸದರಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸಲು ಕೋರಿ, ನಿಯತಕಾಲಿಕ ವರದಿ (ಪೀರ್ಯಾಡಿಕಲ್ ರಿಪೋರ್ಟ್) ಯನ್ನು ಸಲ್ಲಿಸಿರುವುದರಿಂದ, ಸದರಿ ಸಂಸ್ಥೆಗೆ 2016-17ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸಬಹುದಾಗಿದೆ ಎಂದು ಶಿಫಾರಸ್ಸು ಮಾಡಿ ಈ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಕೋರಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 069 ಟಿಪಿಇ 2016.**
**ಬೆಂಗಳೂರು, ದಿನಾಂಕ:04ನೇ ಜನವರಿ 2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಪಿ ಎ ಪಾಲಿಟೆಕ್ನಿಕ್, ಮಂಗಳೂರು ಖಾಸಗಿ ಶಿಕ್ಷಣ ಸಂಸ್ಥೆಗೆ 2016-17ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಈ ಕೆಳಕಂಡ ಷರತ್ತುಗೊಳಪಡಿಸಿ ವಿಸ್ತರಿಸಲಾಗಿದೆ.

1. ಸದರಿ ಪಾಲಿಟೆಕ್ನಿಕ್‌ಗೆ 2016-17ನೇ ಸಾಲಿಗೆ ನಿಗದಿಪಡಿಸಲಾದ ಪ್ರತಿ ಕೋರ್ಸಿನ ಇನ್‌ಟೇಕ್‌ನಲ್ಲಿ ಶೇ.50 ರಷ್ಟನ್ನು ಸರ್ಕಾರದ ಮೀಸಲಾತಿ ಆದೇಶದನ್ವಯ ನೋಡಲ್ ಸೆಂಟರ್ ಮೂಲಕ ಪ್ರವೇಶಾತಿ ನೀಡಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ತುಂಬತಕ್ಕದ್ದು.

ಪುಟ 2ಕ್ಕೆ

5/1/17

2. ಈ ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿಯ 2/3 ರಷ್ಟು ಸದಸ್ಯರು ಮತೀಯ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾಗಿರಬೇಕು.

3. ಪ್ರತಿ ಕೋರ್ಸಿನ ಶೇ.50ರಷ್ಟು ಸೀಟುಗಳನ್ನು ಆಡಳಿತ ಮಂಡಳಿಯ ನಡೆಸಲ್ಪಡುತ್ತಿರುವ ಮತೀಯ ಸಮುದಾಯ ವಿದ್ಯಾರ್ಥಿಗಳಿಂದ ತುಂಬಬೇಕಾಗಿದ್ದು, ಅದರಲ್ಲಿ ಶೇ.75 ರಷ್ಟು ಸೀಟುಗಳನ್ನು ಕರ್ನಾಟಕ ರಾಜ್ಯದಲ್ಲಿನ ಸದರಿ ಸಂಸ್ಥೆಯು ನಡೆಸಲ್ಪಡುತ್ತಿರುವ ಮತೀಯ ಸಮುದಾಯದ ಅಭ್ಯರ್ಥಿಗಳಿಂದ ತುಂಬತಕ್ಕದ್ದು.

4. ಸದರಿ ಶಿಕ್ಷಣ ಸಂಸ್ಥೆಗೆ 2017-18ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸುವ ಬಗ್ಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 131 ಟಿಪಿಇ 2014, ದಿ:20-08-2014ರಲ್ಲಿನ ನಿಯಮಗಳು / ಮಾರ್ಗಸೂಚಿಯಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S. Venkatesh

(ಎಸ್ ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

**ಗೆ:**

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
3. ಪ್ರಾಂಶುಪಾಲರು, ಪಿ.ಎ. [redacted] ಪಾಲಿಟೆಕ್ನಿಕ್, ಮಂಗಳೂರು (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
4. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ /-ಒಡಿಜಿಸಿ

----3....

ಹಿಂಬರಹ ಸಂಖ್ಯೆ: ಡಿಟಿಇ 16 ಡಿಎಂಪಿ(2) 2015 ದಿನಾಂಕ: 09/01/2017.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಅಧ್ಯಕ್ಷರು / ಕಾರ್ಯದರ್ಶಿಗಳು, ಪಿ.ಎ. ಪಾಲಿಟೆಕ್ನಿಕ್, ಮಂಗಳೂರು.- 574153
02. ಪ್ರಿನ್ಸಿಪಾಲರು, ಪಿ.ಎ. ಪಾಲಿಟೆಕ್ನಿಕ್, ಮಂಗಳೂರು. - 574153.
03. ಜಂಟಿ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್]
04. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ]
05. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ/ಎಂಪಿಸಿ]
06. ಉಪ ನಿರ್ದೇಶಕರು (ಸಾಂಖ್ಯಿಕ ವಿಭಾಗ)
07. ಆಡಳಿತಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
09. ಅಧೀಕ್ಷಕರು, ಎಸಿಎಂ ವಿಭಾಗ
10. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
11. ಸರ್ಕಾರಿ ಆದೇಶಗಳ ಕಡತಕ್ಕೆ
12. ಈ ಗೌರ್ನೆನ್ಸ್ ಸೆಲ್‌ಗೆ
13. ಕಛೇರಿ ಪ್ರತಿ.

ಜಂಟಿ ನಿರ್ದೇಶಕರು (ಎಟಿಎಸ್)

10/1/2017